## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಸನಗೌಡ ಬಾದರ್ಲಿ ಇವರು ನಿಯಮ 72ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಹೇಳಿಕೆ

### ವಿಷಯ

ಕಲ್ಯಾಣ ಕರ್ನಾಟಕ ಭಾಗದಲ್ಲೇ ಅತೀ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಹೊಂದಿರುವ ಹಾಗೂ ಅತಿ ಹೆಚ್ಚು ವಿದ್ಯಾರ್ಥಿಗಳನ್ನು ಹೊಂದಿರುವ ಸಿಂಧನೂರು ತಾಲ್ಲೂಕಿಗೆ ಸರ್ಕಾರಿ ಐ.ಟಿ.ಐ ಕಾಲೇಜನ್ನು ಮಂಜೂರು ಮಾಡುವ ಕುರಿತು ಮಾನ್ಯ ವೈದ್ಯಕೀಯ ಶೀಕ್ಷಣ & ಕೌಶಲ್ಯಾಭಿವೃದ್ಧಿ ಸಚಿವರ ಗಮನಸೆಳೆಯ ಬಯಸುತ್ತೇನೆ.

### ಹೇಳಿಕೆ

ಪ್ರಸ್ತುತ ಸಿಂಧನೂರಿನಲ್ಲಿ 01 ಖಾಸಗಿ ಅನುದಾನಿತ ಮತ್ತು 02 ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. ಅಲ್ಲದೆ ಸಿಂಧನೂರಿನಿಂದ 25 ಕಿ.ಮಿ ದೂರದಲ್ಲಿರುವ ಮಾನ್ವಿಯಲ್ಲಿ 01 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಕಾರ್ಯನಿರ್ವಹಿಸುತ್ತಿದೆ.

ರಾಜ್ಯದಲ್ಲಿ ಪ್ರಸ್ತುತ 270 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ಈ ಪೈಕಿ 2014-15 ನೇ ಸಾಲಿನಲ್ಲಿ 100 ಹಾಗೂ 2017-18ನೇ ಸಾಲಿನಲ್ಲಿ 12 ಹೊಸ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಪ್ರಾರಂಭಿಸಿದ್ದು, ಈ ಸಂಸ್ಥೆಗಳಿಗೆ ಮೂಲಭೂತ ಸೌಲಭ್ಯಗಳಾದ ಕಟ್ಟಡ, ಯಂತ್ರೋಪಕರಣಗಳನ್ನು ಒದಗಿಸುವುದು ಮತ್ತು ರಾಜ್ಯದ ಎಲ್ಲಾ 270 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಅಗತ್ಯವಿರುವ ಸಿಬ್ಬಂದಿಗಳನ್ನು ಒದಗಿಸುವುದು ಆದ್ಯತೆಯಾಗಿರುವುದರಿಂದ ಪ್ರಸ್ತುತ ಹೊಸದಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಪ್ರಾರಂಭಿಸುವ ಉದ್ದೇಶವಿರುವುದಿಲ್ಲ.

**ಕೌಉಜೀಇ 39 ಕೈತಪ್ರ 2026**

(ಡಾ. ಶರಣಪ್ರಕಾಶ ಆರ್ ಪಾಟೀಲ)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.